## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 827 (903)
ಮಾನ್ಯ ಸದಸ್ಯರ ಹೆಸರು : ಶ್ರೀ ಹೆಚ್. ಪಿ. ಸುದಾಮ್ ದಾಸ್
ಉತ್ತರಿಸುವ ದಿನಾಂಕ : 14-03-2025
ಉತ್ತರಿಸುವ ಸಚಿವರು : ಮಾನ್ಯ ಸಮಾಜ ಕಲ್ಯಾಣ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಸಮಾಜ ಕಲ್ಯಾಣ ಇಲಾಖೆಯಿಂದ 2023-24 ಹಾಗೂ 2024-25ನೇ ಸಾಲಿನಲ್ಲಿ ಆಯೋಜಿಸಿರುವ ಜಾಗೃತಿ ಕಾರ್ಯಕ್ರಮಗಳ ಸಂಖ್ಯೆ ಎಷ್ಟು; ಅದಕ್ಕೆ ವೆಚ್ಚವಾಗಿರುವ ಹಣ ಎಷ್ಟು; (ಕೈಗೊಳ್ಳಲಾಗಿರುವ ಪ್ರತಿಯೊಂದು ಕಾರ್ಯಕ್ರಮದ ಹಾಗೂ ಅದಕ್ಕೆ ವೆಚ್ಚವಾಗಿರುವ ಹಣದ ಮಾಹಿತಿ ಒದಗಿಸುವುದು)</td><td>2023-24 ಹಾಗೂ 2024-25 ನೇ ಸಾಲಿನಲ್ಲಿ ಆಯೋಜಿಸಲಾಗಿರುವ ಜಾಗೃತಿ ಕಾರ್ಯಕ್ರಮಗಳು ಮತ್ತು ವೆಚ್ಚದ ವಿವರ ಈ ಕೆಳಕಂಡಂತಿದೆ.<br>(ರೂ. ಲಕ್ಷಗಳಲ್ಲಿ)<br><table><tr><th>ಕ್ರ.ಸಂ</th><th>ವರ್ಷ</th><th>ಕಾರ್ಯಕ್ರಮಗಳ ಸಂಖ್ಯೆ</th><th>ವೆಚ್ಚ</th></tr><tr><td>1</td><td>2023-24</td><td>762</td><td>125.00</td></tr><tr><td>2</td><td>2024-25</td><td>3388</td><td>940.84</td></tr></table></td></tr>
<tr><td>ಆ)</td><td>ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ವ್ಯಕ್ತಿ ಹಾಗೂ ಸಂಘ ಸಂಸ್ಥೆಗಳ ಪೂರ್ವಾರ್ಹತೆ ಏನು? (ಸಂಪೂರ್ಣ ವಿವರ ಒದಗಿಸುವುದು)</td><td>ಸರ್ಕಾರದ ಆದೇಶ ಸಂಖ್ಯೆ: ಸಕಇ 07 ಎಸ್‌ಎಲ್ ಪಿ 2022 ದಿನಾಂಕ: 31.01.2022 ಮತ್ತು ಸರ್ಕಾರದ ಸುತ್ತೋಲೆ ಸಂಖ್ಯೆ:SWD/CORD/CS-1/99 2022, ದಿನಾಂಕ: 19.07.2023 ಹಾಗೂ ಸರ್ಕಾರದ ಆದೇಶ ಸಂಖ್ಯೆ : ಸಕಇ 316 ಎಸ್‌ಎಲ್ ಪಿ 2024 ದಿನಾಂಕ: 15.10.2024 ರಂತೆ ಸ್ವಯಂ ಸೇವಾ ಸಂಸ್ಥೆಗಳ ಸಹಭಾಗಿತ್ವದಲ್ಲಿ ಜಿಲ್ಲೆಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ (ಆದೇಶದ ಪ್ರತಿಯನ್ನು ಅನುಬಂಧದಲ್ಲಿ ನೀಡಲಾಗಿದೆ).</td></tr>
</table>

**ಸಕಇ 246 ಎಸ್‌ಎಲ್‌ಪಿ 2025**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**

ಅನುಬಂಧ.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಮಾಜ ಕಲ್ಯಾಣ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ಪ್ರತಿಬಂಧ ಅಧಿನಿಯಮ 1989 ಹಾಗೂ 2015 ಮತ್ತು ನಿಯಮಗಳು 1995 ಮತ್ತು ಪರಿಷ್ಕೃತ ನಿಯಮಗಳು 2016 ರ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಮಾರ್ಗಸೂಚಿಗಳನ್ನು ಪರಿಷ್ಕರಿಸಿ ರೂಪಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ:ಸಕಇ 47 ಎಸ್‌ಪಿಎ 2018, ದಿನಾಂಕ:29.03.2019

2. ಶ್ರೀ ಬಿ. ಚನ್ನಕೃಷ್ಣಪ್ಪ, ರಾಜ್ಯಾಧ್ಯಕ್ಷರು, ಕರ್ನಾಟಕ ಸಮತಾ ಸೈನಿಕ ದಳ-ಕೆಎಸ್‌ಎಸ್‌ಡಿ(ರಿ), ಬೆಂಗಳೂರು ಇವರ ಮನವಿ ದಿನಾಂಕ:25.01.2022

*********

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರಿ ಆದೇಶ ದಿನಾಂಕ:29.03.2019ರ ಆದೇಶದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಸರ್ಕಾರೇತರ ಸಂಸ್ಥೆಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ಪ್ರತಿಬಂಧ ನಿಯಮಗಳು 1995 ರ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ನಡೆಸಲು, ನಿಗದಿಪಡಿಸಿದ ಅನುದಾನವನ್ನು ಪರಿಷ್ಕರಿಸಲು ಮತ್ತು ವಿಚಾರಗೋಷ್ಠಿ ಮತ್ತು ಕಾರ್ಯಾಗಾರಗಳನ್ನು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಮಾರ್ಗಸೂಚಿಗಳನ್ನು ರೂಪಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀ ಬಿ. ಚನ್ನಕೃಷ್ಣಪ್ಪ, ರಾಜ್ಯಾಧ್ಯಕ್ಷರು, ಕರ್ನಾಟಕ ಸಮತಾ ಸೈನಿಕ ದಳ - ಕೆಎಸ್‌ಎಸ್‌ಡಿ(ರಿ), ಬೆಂಗಳೂರು ಇವರು ಮನವಿಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅಸ್ಪೃಶ್ಯತಾ ನಿವಾರಣೆ ಎಸ್.ಸಿ/ಎಸ್.ಟಿ ದೌರ್ಜನ್ಯ ತಡೆ ಕಾಯ್ದೆ 1989 ಮತ್ತು ಸಮಾಜ ಕಲ್ಯಾಣ ಇಲಾಖೆಯಲ್ಲಿನ ಕಾರ್ಯಕ್ರಮಗಳು ಹಾಗೂ ಸೌಲಭ್ಯಗಳ ಕುರಿತು ಹೊರಾಂಗಣದಲ್ಲಿ ಅರಿವು ಮೂಡಿಸುವ ಸಪ್ತಾಹ, ಬೀದಿ ನಾಟಕಗಳನ್ನು ನಡೆಸಲು ಕರ್ನಾಟಕ ಸಮತಾ ಸೈನಿಕ ದಳ - ಕೆಎಸ್‌ಎಸ್‌ಡಿ(ರಿ) ಇಲ್ಲಿ 3 ಕಲಾತಂಡಗಳಿದ್ದು, ಉತ್ತಮ ವಾಹನ ಸೌಲಭ್ಯ, ಧ್ವನಿವರ್ಧಕಗಳ ವ್ಯವಸ್ಥೆ, ನುರಿತ ಕಲಾವಿದರಿದ್ದು, ಸದರಿ ಕಾರ್ಯಕ್ರಮಗಳನ್ನು 4-5 ವರ್ಷಗಳಿಂದ ಯಶಸ್ವಿಯಾಗಿ ನಡೆಸಿ ಕೊಂಡು ಬಂದಿರುತ್ತೇವೆ. ಆದುದರಿಂದ ಅರಿವು ಮೂಡಿಸುವ ಕಾರ್ಯಕ್ರಮಕ್ಕೆ ಸದರಿ ಮೊತ್ತವನ್ನುಕನಿಷ್ಟ ದುಪ್ಪಟ್ಟು ಹೆಚ್ಚಳ ಮಾಡಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಕಇ 07 ಎಸ್‌ಪಿಎ 2022, ಬೆಂಗಳೂರು, ದಿನಾಂಕ:31-01-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ಪ್ರತಿಬಂಧ ಅಧಿನಿಯಮ 1989 ಹಾಗೂ 2015 ಮತ್ತು ನಿಯಮಗಳು 1995 ಮತ್ತು ಪರಿಷ್ಕೃತ ನಿಯಮಗಳು 2016 ರ ಪ್ರಕಾರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸರ್ಕಾರೇತರ ಸಂಘ/ಸಂಸ್ಥೆಗಳ ಮೂಲಕ ಜಾಗೃತಿ/ಅರಿವು ಮೂಡಿಸಲು, ವಿಚಾರಗೋಷ್ಠಿ ಮತ್ತು ಕಾರ್ಯಾಗಾರಗಳನ್ನು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಪರಿಣಾಮಕಾರಿಯಾಗಿ ಆಯೋಜಿಸುವ

--2

ಸಲುವಾಗಿ ಹಣಕಾಸು ಮತ್ತು ಇತರೆ ನೆರವುಗಳನ್ನು ಪರಿಷ್ಕರಿಸಿ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದಲ್ಲಿರುವಂತೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

31/01/22
(ಶಿವಲಿಂಗಪ್ರಭು ವಾಲಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ

ಇವರಿಗೆ:

1) ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2) ಎಲ್ಲಾ ಪ್ರಾದೇಶಿಕ ಆಯುಕ್ತರು, ಕಂದಾಯ ಇಲಾಖೆ.
3) ಅಪರ ಪೊಲೀಸ್ ಮಹಾನಿರ್ದೇಶಕರು, ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯ, ಬೆಂಗಳೂರು,
4) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
5) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು
6) ಎಲ್ಲಾ ಜಿಲ್ಲಾಧಿಕಾರಿಗಳು,
7) ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು,
8) ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾಪಂಚಾಯತ್
9) ಎಲ್ಲಾ ಉಪ ವಿಭಾಗಾಧಿಕಾರಿಗಳು, ಕಂದಾಯ ಇಲಾಖೆ
10) ಎಲ್ಲಾ ಜಿಲ್ಲೆಗಳ ಜಂಟಿ / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
11) ಎಲ್ಲಾ ತಹಶೀಲ್ದಾರರುಗಳು
12) ಎಲ್ಲಾ ತಾಲ್ಲೂಕುಗಳ ಸಹಾಯಕ ನಿರ್ದೇಶಕರು (ಗ್ರೇಡ್-1/ ಗ್ರೇಡ್-2), ಸಮಾಜ ಕಲ್ಯಾಣ ಇಲಾಖೆ
13) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

(6–12) ಆಯುಕ್ತರು ಸ.ಕ.ಇಲಾಖೆ ಮುಖಾಂತರ

ಪ್ರತಿ:

1) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ
2) ಮಾನ್ಯ ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ
4) ಸರ್ಕಾರದ ಉಪ ಕಾರ್ಯದರ್ಶಿ 1 & 2 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ

******

ಸರ್ಕಾರಿ ಆದೇಶ ಸಂಖ್ಯೆ:ಸಕಇ 07 ಎಸ್‌ಪಿಎ 2022, ದಿನಾಂಕ:31-01-2022 ಕ್ಕೆ

ಅನುಬಂಧ

ಸಮಾಜ ಕಲ್ಯಾಣ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳ ಬಗ್ಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮದ ಮಾರ್ಗಸೂಚಿಗಳು:-

1) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಈ ಕೆಳಕಂಡ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸುವುದು:-

- ದೌರ್ಜನ್ಯ ಪ್ರತಿಬಂಧ ಅಧಿನಿಯಮ 1989 ಹಾಗೂ 2015 ಮತ್ತು ನಿಯಮಗಳು 1995 ಮತ್ತು ಪರಿಷ್ಕೃತ ನಿಯಮಗಳು 2016
- ಎಸ್‌ಸಿಎಸ್‌ಪಿ/ ಟಿಎಸ್‌ಪಿ ಕಾಯ್ದೆ- 2013 ಮತ್ತು ನಿಯಮಗಳು- 2017
- ಎಸ್‌ಸಿಎಸ್‌ಪಿ/ಟಿಎಸ್‌ಪಿ ಕಾಯ್ದೆಯಡಿ ವಿವಿಧ ಅಭಿವೃದ್ಧಿ ಇಲಾಖೆಗಳು ಅನುಷ್ಠಾನ ಮಾಡುತ್ತಿರುವ ಕಾರ್ಯಕ್ರಮಗಳ ವಿವರ
- ಸಮಾಜ ಕಲ್ಯಾಣ ಇಲಾಖೆ/ ನಿಗಮಗಳಿಂದ ಅನುಷ್ಠಾನಗೊಳ್ಳುತ್ತಿರುವ ಶೈಕ್ಷಣಿಕ ಹಾಗೂ ಆರ್ಥಿಕ ಅಭಿವೃದ್ಧಿ ಮತ್ತು ಸಾಮಾಜಿಕ ಸಬಲೀಕರಣ ಕಾರ್ಯಕ್ರಮಗಳ ವಿವರ
- ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದವರ ಜಮೀನು ಪರಭಾರೆ ನಿಷೇಧ ಅಧಿನಿಯಮ (PTCL Act)
- ಅರಣ್ಯ ಹಕ್ಕು ಕಾಯ್ದೆ 2005 ರ ಅನುಷ್ಠಾನದ ಬಗ್ಗೆ ಮಾಹಿತಿ.
  Protection of Civil Rights Act 1955 ಮತ್ತು ನಿಯಮಗಳು
- ಅಸ್ಪೃಶ್ಯತ ನಿವಾರಣೆ ಮತ್ತು ಅಂತರಜಾತಿ, ಸರಳವಿವಾಹ, ವಿಧವಾ ಮರುವಿವಾಹ ಕಾರ್ಯಕ್ರಮಗಳು.
- ಎಸ್.ಸಿ/ಎಸ್.ಟಿ. ಉದ್ದಿಮೆದಾರರಿಗೆ ನೀಡಲಾಗುತ್ತಿರುವ ಸಾಲ-ಸಹಾಯಧನ ಇತ್ಯಾಧಿಗಳು

2) ಸಾರ್ವಜನಿಕರಿಗೆ ಅರಿವು ಮೂಡಿಸುವ ವಿಧಾನಗಳು:-

- ಸಮಾಜ ಕಲ್ಯಾಣ ಇಲಾಖೆ ಮತ್ತು ಇತರ ಇಲಾಖೆಗಳ ಅಧಿಕಾರಿಗಳಿಗೆ, ಕಂದಾಯ ಇಲಾಖೆ ಮತ್ತು ಪೋಲೀಸ್ ಇಲಾಖೆ ಅಧಿಕಾರಿಗಳಿಗೆ ತರಬೇತಿ ಕಾರ್ಯಕ್ರಮ.
- ಕಾರ್ಯಾಗಾರ/ ವಿಚಾರಸಂಕೀರ್ಣ - ಸಾರ್ವಜನಿಕರಿಗೆ, ಶಿಕ್ಷಣ ಸಂಸ್ಥೆಗಳು ಮತ್ತು ಇತರ ಸಂಸ್ಥೆಗಳಲ್ಲಿ - ಬೀದಿನಾಟಕ, ರೂಪಕ, ಸಾಕ್ಷಚಿತ್ರ ಪ್ರದರ್ಶನ, ಪ್ರಕಟಣೆಗಳು- ಕರಪತ್ರ, ಕೈಪಿಡಿ, ಪೋಸ್ಟರ್, ಬ್ಯಾನರ್, ಭಿತ್ತಿಪತ್ರ ಇತ್ಯಾದಿಗಳು.

3) ಸರ್ಕಾರ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಸ್ವಯಂಸೇವಾ ಸಂಸ್ಥೆಗಳು/ಸಂಘಗಳ ಸಹಭಾಗಿತ್ವ ಇಲಾಖೆ ಮತ್ತು ಸಂಘ ಸಂಸ್ಥೆಗಳ ಸಹಭಾಗಿತ್ವದಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು:-

ಅ) ಸ್ವಯಂಸೇವಾ ಸಂಸ್ಥೆಗಳಿಗೆ ಇರಬೇಕಾದ ಅರ್ಹತೆಗಳು:-

- ಸ್ವಯಂಸೇವಾ ಸಂಸ್ಥೆಯು ನೋಂದಣಿಗೊಂಡಿದ್ದು, ನೊಂದಣಿ ಚಾಲ್ತಿಯಲ್ಲಿರಬೇಕು.
- ಸ್ವಯಂಸೇವಾ ಸಂಸ್ಥೆಯು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಅಭಿವೃದ್ಧಿಗಾಗಿ ಕನಿಷ್ಟ 5 ವರ್ಷ ಸೇವೆ ಸಲ್ಲಿಸಿರಬೇಕು.
- ಎಸ್.ಸಿ./ಎಸ್.ಟಿ. ಜನರ ಕಲ್ಯಾಣಕ್ಕಾಗಿ ಸೇವೆ ಸಲ್ಲಿಸುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಂಘಗಳು
- ಸಂಸ್ಥೆ/ಸಂಘ ಪ್ರತಿವರ್ಷ ಆಡಿಟ್ ಮಾಡಿಸಿರಬೇಕು.
- ಸಂಸ್ಥೆ/ಸಂಘವು ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಿರುವ ಅನುಭವ ಹೊಂದಿರತಕ್ಕದ್ದು.

..2

ಆ) ಸಲ್ಲಿಸಬೇಕಾದ ದಾಖಲೆಗಳು:-

- ಸಂಘ/ಸಂಸ್ಥೆಯ ನೋಂದಣಿ ಪ್ರಮಾಣ ಪತ್ರ, ನವೀಕರಣ ಪ್ರಮಾಣ ಪತ್ರ
- ಮೂರು ವರ್ಷದ ಆಡಿಟ್ ರಿಪೋರ್ಟ್
- ಸಂಘ/ಸಂಸ್ಥೆಯು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭಿವೃದ್ಧಿಗಾಗಿ 5 ವರ್ಷ ಸೇವೆ ಸಲ್ಲಿಸಿರುವ ಬಗ್ಗೆ ದೃಢೀಕೃತ ದಾಖಲೆ.
- ಅರಿವು ಮೂಡಿಸುವ ಕಾರ್ಯಕ್ರಮ ಆಯೋಜಿಸಿರುವ ಬಗ್ಗೆ ದಾಖಲೆಗಳು- ಛಾಯಾಚಿತ್ರ, ಪತ್ರಿಕಾ ವರದಿ.
- ಸಂಸ್ಥೆಯು ದೌರ್ಜನ್ಯ ಪ್ರತಿಬಂಧ ಅಧಿನಿಯಮ 1989 ರ ಅನುಷ್ಠಾನ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿರುವ ಬಗ್ಗೆ ದಾಖಲೆಗಳು, ಪ್ರಕಟಣೆಗಳು, ಕರಪತ್ರ, ಚಿತ್ರಪತ್ರ ಇತ್ಯಾದಿ.

4)ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳ ಕ್ರಿಯಾಯೋಜನೆ ಅನುಮೋದನೆ:-

- ಪ್ರತಿ ವರ್ಷ ಏಪ್ರಿಲ್ ತಿಂಗಳಲ್ಲಿ, ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ವಿವರದೊಂದಿಗೆ ರಾಜ್ಯಮಟ್ಟದ ಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರ ನೀಡಿ ಸ್ವಯಂಸೇವಾ ಸಂಸ್ಥೆ/ಸಂಘಗಳಿಂದ ಪ್ರಸ್ತಾವನೆಗಳನ್ನು ಪಡೆಯುವುದು.
- ಪತ್ರಿಕೆಗಳಲ್ಲಿ ಪ್ರಕಟಣೆ ನೀಡಿರುವ ಬಗ್ಗೆ ಕೇಂದ್ರ ಕಛೇರಿಗೆ ಮಾಹಿತಿ ಸಲ್ಲಿಸುವುದು.
- ಸಂಘ/ಸಂಸ್ಥೆಗಳ ಅರ್ಹತೆ ಮತ್ತು ದಾಖಲೆಗಳನ್ನು ಪರಿಶೀಲಿಸಿ ಅರ್ಹ ಸಂಸ್ಥೆಗಳ ಪಟ್ಟಿಯನ್ನು ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಇವರು ಸಿದ್ಧಪಡಿಸುವುದು.
- ಆಯಾ ವರ್ಷದ ಏಪ್ರಿಲ್-ಜೂನ್ ತಿಂಗಳ ಅವಧಿಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯಲ್ಲಿ ಕಾರ್ಯಕ್ರಮ ಆಯೋಜನೆ ಬಗ್ಗೆ ಸಂಸ್ಥೆಗಳ ಮತ್ತು ಸ್ಥಳದ ಆಯ್ಕೆಯ ಬಗ್ಗೆ ಕ್ರಿಯಾಯೋಜನೆಗೆ ಅನುಮೋದನೆ ಪಡೆಯುವುದು.
- ಕ್ರಿಯಾಯೋಜನೆ ಅನುಸಾರ ಕಾರ್ಯಕ್ರಮ ಅನುಷ್ಠಾನ ಮಾಡುವುದು.
- ಮುಖ್ಯವಾಗಿ ಈ ಕೆಳಕಂಡ ಕಾಯ್ದೆಗಳ ಬಗ್ಗೆ ಎಸ್.ಸಿ/ಎಸ್.ಟಿ. ಜನರ ಜೊತೆ ಇತರೆ ಎಲ್ಲಾ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

1) ದೌರ್ಜನ್ಯ ಪ್ರತಿಬಂಧ ಅಧಿನಿಯಮ 1989 ಹಾಗೂ 2015 ಮತ್ತು ನಿಯಮಗಳು 1995 ಪರಿಷ್ಕೃತ ನಿಯಮಗಳು 2016.

2) Protection of Civil Rights Act 1955 ಮತ್ತು ನಿಯಮಗಳು

3) ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದವರ ಜಮೀನು ಪರಭಾರೆ ನಿಷೇಧ ಅಧಿನಿಯಮ (PTCL Act)

5) ಕಾರ್ಯಕ್ರಮಗಳಿಗೆ ಭರಿಸಬೇಕಾದ ವೆಚ್ಚದ ಗರಿಷ್ಟ ಮಿತಿ:-

(ರೂ.ಗಳಲ್ಲಿ)

| ಕ್ರ.ಸಂ. | ವಿವರ | ಪ್ರತಿ ಕಾರ್ಯಕ್ರಮದ ವೆಚ್ಚದ ಗರಿಷ್ಟ ಮಿತಿ |
|---|---|---|
| 1 | ಗ್ರಾಮ ಮಟ್ಟ | 20,000 |
| 2 | ಹೋಬಳಿ ಮಟ್ಟ | 40,000 |
| 3 | ತಾಲ್ಲೂಕು ಮಟ್ಟ | 1,00,000 |
| 4 | ಜಿಲ್ಲಾಮಟ್ಟ | 2,00,000 |
| 5 | ಜಿಲ್ಲಾಮಟ್ಟದಲ್ಲಿ 2-3 ದಿನಗಳ ವಸತಿ ಸಹಿತ ತರಬೇತಿ ಕಾರ್ಯಾಗಾರ | ರೂ. 1000/- ರಂತೆ ವೆಚ್ಚ ಭರಿಸುವುದು. ಶಿಬಿರಾರ್ಥಿಗಳ ಪ್ರಯಾಣ ಭತ್ಯೆ ಮತ್ತು ಸಂಪನ್ಮೂಲ ವ್ಯಕ್ತಿಗಳ ಗೌರವಧನ ಪ್ರತ್ಯೇಕವಾಗಿ ನೀಡುವುದು. |

ಗ್ರಾಮ, ಹೋಬಳಿ, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಕಾರ್ಯಕ್ರಮಗಳಿಗೆ ನಿಗಧಿಪಡಿಸಿರುವ ಮೊತ್ತದಲ್ಲಿ ಮಾಹಿತಿ/ಕರಪತ್ರ ಪ್ರಕಟಣೆ, ವೀಡಿಯೋ ಚಿತ್ರೀಕರಣ, ಛಾಯಾಚಿತ್ರ, ಲಘುಉಪಹಾರ/ ಭೋಜನ, ಸಂಪನ್ಮೂಲ ವ್ಯಕ್ತಿಗಳಿಗೆ ಗೌರವಧನ, ಬ್ಯಾನರ್, ಸ್ಟೇಷನರಿ ಇತ್ಯಾದಿ ವೆಚ್ಚ ಭರಿಸುವುದು.

6) ಕಾರ್ಯಕ್ರಮ ಆಯೋಜನೆಗೊಂಡ ಬಳಿಕ ಸ್ವಯಂಸೇವಾ ಸಂಸ್ಥೆ/ಸಂಘಗಳು ಸಲ್ಲಿಸಬೇಕಾದ ದಾಖಲೆಗಳು:-

ಕಾರ್ಯಕ್ರಮ ಆಯೋಜನೆಗೊಂಡ ಬಳಿಕ ಇಲಾಖೆ ಮತ್ತು ಸಂಘ-ಸಂಸ್ಥೆಗಳು ಜಂಟಿಯಾಗಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಿ ದಾಖಲಾತಿಗಳನ್ನು ಮತ್ತು ವೆಚ್ಚದ ವಿವರಗಳನ್ನು ತಯಾರಿಸಿ ಇಲಾಖೆ ವಶದಲ್ಲಿಟ್ಟುಕೊಳ್ಳುವುದು.

31/01/22

(ಶಿವಲಿಂಗಪ್ರಭು ವಾಲಿ),
ಸರ್ಕಾರದ ಅಧೀನ ಕಾರ್ಯದರ್ಶಿ-2,
ಸಮಾಜ ಕಲ್ಯಾಣ ಇಲಾಖೆ.

*******

**ಕರ್ನಾಟಕ ಸರ್ಕಾರ**

ಸಂಖ್ಯೆ: SWD/CORD/CS-1/99/2022
934702

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು ದಿನಾಂಕ:19-07-2023

**ಸುತ್ತೋಲೆ**

ವಿಷಯ: ದೌರ್ಜನ್ಯ ಕಾಯ್ದೆಯ ಬಗ್ಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸಮುದಾಯವನ್ನು ಹೊರತುಪಡಿಸಿ ಇತರ ಸಮುದಾಯದವರಿಗೆ ಹಾಗೂ ವಿಶೇಷವಾಗಿ ಯುವಕರಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಏರ್ಪಡಿಸುವ ಬಗ್ಗೆ.

ಉಲ್ಲೇಖ:
1. ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ದಿನಾಂಕ:20-02-2023 ರಂದು ನಡೆದ ರಾಜ್ಯ ಮಟ್ಟದ ಜಾಗೃತ ಮತ್ತು ಉಸ್ತುವಾರಿ ಸಮಿತಿ ಸಭೆಯ ನಡವಳಿ.
2. ಸರ್ಕಾರದ ಆದೇಶ ಸಂಖ್ಯೆ:ಸಕಇ 07 ಎಸ್ ಪಿಎ 2022, ಬೆಂಗಳೂರು ದಿನಾಂಕ:31-01-2022.

*******

ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ:20-02-2023 ರಂದು ನಡೆದ ರಾಜ್ಯ ಮಟ್ಟದ ಜಾಗೃತ ಮತ್ತು ಉಸ್ತುವಾರಿ ಸಮಿತಿ ಸಭೆಯ ನಡವಳಿಯಲ್ಲಿ ದೌರ್ಜನ್ಯ ಕಾಯ್ದೆಯ ಕುರಿತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸಮುದಾಯವನ್ನು ಹೊರತುಪಡಿಸಿ ಇತರ ಸಮುದಾಯದವರಿಗೆ ಹಾಗೂ ವಿಶೇಷವಾಗಿ ಯುವಕರಿಗೆ ಅರಿವು ಮೂಡಿಸಲು ಸೂಕ್ತ ಕಾರ್ಯಕ್ರಮವನ್ನು ಕಾಲೇಜು, ವಿಶ್ವವಿದ್ಯಾಲಯಗಳಲ್ಲಿಯೂ ಸಹ ಹಮ್ಮಿಕೊಳ್ಳುವುದು ಮತ್ತು ಸಾಮಾಜಿಕ ಜಾಲತಾಣಗಳನ್ನು ಬಳಸಿಕೊಂಡು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಮಾನ್ಯ ಮುಖ್ಯಮಂತ್ರಿಗಳು ಉಲ್ಲೇಖ (1)ರ ಸಭೆಯ ನಡವಳಿಯಲ್ಲಿ ಸೂಚಿಸಿರುತ್ತಾರೆ.

ಈ ಸಂಬಂಧವಾಗಿ, ಉಲ್ಲೇಖ (2)ರ ಆದೇಶದಲ್ಲಿ ದಿನಾಂಕ:31-01-2022 ರಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ದೌರ್ಜನ್ಯ ಪ್ರತಿಬಂಧ ಅಧಿನಿಯಮ - 1989 ಹಾಗೂ 2015 ಮತ್ತು ನಿಯಮಗಳು - 1995 ಮತ್ತು ಪರಿಷ್ಕೃತ ನಿಯಮಗಳು - 2016ರ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಎಲ್ಲಾ ಜಿಲ್ಲೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ ಸಲ್ಲಿಸಲಾಗಿರುತ್ತದೆ.

ಸದರಿ ಆದೇಶದ ಅಂಶಗಳನ್ನು ಒಳಗೊಂಡಂತೆ ಹಾಗೂ ಮಾನ್ಯ ಮುಖ್ಯಮಂತ್ರಿಗಳು ಸೂಚಿಸಿರುವ ಪ್ರಕಾರ ದೌರ್ಜನ್ಯ ಕಾಯ್ದೆಯ ಬಗ್ಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಹಾಗೂ ಇತರೆ ಸಮುದಾಯದ ವ್ಯಕ್ತಿಗಳಿಗೆ ಮತ್ತು

ವಿಶೇಷವಾಗಿ ಯುವಕರಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಈ ಬಗ್ಗೆ ಸಾಮಾಜಿಕ ಜಾಲತಾಣಗಳನ್ನು ಸಹ ಬಳಸಿಕೊಳ್ಳುವಂತೆ ಅಗತ್ಯ ಕ್ರಮ ಕೈಗೊಳ್ಳುವುದು.

(ಶಿವಶಂಕರ ನಾಯಕ್ ಎಲ್)
ಸರ್ಕಾರದ ಉಪ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ.

ಗೆ:

1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
2. ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು, ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯ, ಬೆಂಗಳೂರು.
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು
6. ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್
7. ಎಲ್ಲಾ ಉಪ ವಿಭಾಗಾಧಿಕಾರಿಗಳು, ಕಂದಾಯ ಇಲಾಖೆ.
8. ಎಲ್ಲಾ ಜಿಲ್ಲೆಗಳ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
9. ಎಲ್ಲಾ ತಹಶೀಲ್ದಾರರುಗಳು.
10. ಎಲ್ಲಾ ತಾಲ್ಲೂಕುಗಳ ಸಹಾಯಕ ನಿರ್ದೇಶಕರು, ಗ್ರೇಡ್-1 & 2, ಸಮಾಜ ಕಲ್ಯಾಣ ಇಲಾಖೆ.

*****

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸಮಾಜ ಕಲ್ಯಾಣ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ನಾಗರೀಕ ಹಕ್ಕು ರಕ್ಷಣಾ ಕಾಯ್ದೆ, 1955 ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ಪ್ರತಿಬಂಧ) ಅಧಿನಿಯಮ ಹಾಗೂ ಇತರೆ ಯೋಜನೆಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳ ಮಾರ್ಗಸೂಚಿಗಳನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಸಕಇ 07 ಎಸ್‌ಪಿಎ 2022, ದಿನಾಂಕ:31-01-2022.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಏಕ ಕಡತ ಸಂಖ್ಯೆ: SWD/CRD/CS-4/329/2023-CORD A-SOCIAL WELFARE COMMISSIONER (1220462)

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ದೌರ್ಜನ್ಯ ತಡೆ ಕಾಯ್ದೆ ಮತ್ತು ಯೋಜನೆಗಳ ಬಗ್ಗೆ ಜಿಲ್ಲಾ/ತಾಲ್ಲೂಕು/ಹೋಬಳಿ/ಗ್ರಾಮ ಮಟ್ಟದಲ್ಲಿ ಅರಿವು ಮೂಡಿಸುವ ಬಗ್ಗೆ ತಿಳಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಏಕ ಕಡತದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಅನುಷ್ಠಾನಗೊಳಿಸುವ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಮೇಲೆ ಓದಲಾದ(1)ರಲ್ಲಿನ ಆದೇಶಕ್ಕೆ ಕೆಲವು ಅಂಶಗಳನ್ನು ಸೇರ್ಪಡಿಸುವ ಸಲುವಾಗಿ ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸುವಂತೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 316 ಎಸ್‌ಎಲ್‌ಪಿ 2024 ಬೆಂಗಳೂರು, ದಿನಾಂಕ:15-10-2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ಪ್ರತಿಬಂಧ) ಅಧಿನಿಯಮ 1989 (ತಿದ್ದುಪಡಿ) ಅಧಿನಿಯಮ 2015 ಮತ್ತು ನಿಯಮಗಳು 1995 (ತಿದ್ದುಪಡಿ) ನಿಯಮಗಳು 2016 ಮತ್ತು ನಾಗರೀಕ ಹಕ್ಕು ರಕ್ಷಣಾ ಕಾಯ್ದೆ 1955 ರಂತೆ, ಸರ್ಕಾರೇತರ ಸಂಘ/ಸಂಸ್ಥೆಗಳ ಸಮನ್ವಯದೊಂದಿಗೆ ಜಾಗೃತಿ/ಅರಿವು ಮೂಡಿಸಲು ವಿಚಾರಗೋಷ್ಠಿ/ಕಾರ್ಯಗಾರ ಮತ್ತು ಇತರೆ ಕಾರ್ಯಕ್ರಮಗಳನ್ನು ಜಿಲ್ಲಾ/ತಾಲ್ಲೂಕು/ಹೋಬಳಿ/ಗ್ರಾಮ ಮಟ್ಟದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಈ ಕೆಳಕಂಡಂತೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

1. **ಈ ಕೆಳಕಂಡ ಅಧಿನಿಯಮಗಳು ಮತ್ತು ಯೋಜನೆಗಳ ಬಗ್ಗೆ ವಿವಿಧ ಹಂತದಲ್ಲಿ ಕಾರ್ಯಾಗಾರ / ವಿಚಾರಗೋಷ್ಠಿ ಮತ್ತು ಇತರೆ ಕಾರ್ಯಕ್ರಮಗಳನ್ನು ಆಯೋಜಿಸುವುದು.**

1) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ಪ್ರತಿಬಂಧ) ಅಧಿನಿಯಮ 1989 (ತಿದ್ದುಪಡಿ) ಅಧಿನಿಯಮ 2015 ಮತ್ತು ನಿಯಮಗಳು 1995 (ತಿದ್ದುಪಡಿ) ನಿಯಮಗಳು 2016
2) ನಾಗರಿಕ ಹಕ್ಕು ಸಂರಕ್ಷಣಾ ಅಧಿನಿಯಮ 1955 ಮತ್ತು ನಿಯಮಗಳು 1977.
3) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ (ಕೆಲವು ಭೂಮಿಗಳ ಪರಭಾರೆ ನಿಷೇಧ) ಅಧಿನಿಯಮ 1978.
4) ಕರ್ನಾಟಕ ಅನುಸೂಚಿತ ಜಾತಿಗಳ ಉಪ ಹಂಚಿಕೆ ಮತ್ತು ಬುಡಕಟ್ಟು ಉಪ ಹಂಚಿಕೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ, 2013 ಮತ್ತು ನಿಯಮಗಳು, 2017
5) ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ಅಧಿನಿಯಮ, 1990 ಮತ್ತು ನಿಯಮಗಳು,1992
6) The Karnataka Land Revenue Act, 1964 and Rules (Upgradation of Khata etc.)
7) The Karnataka Devadasis (Prohibition of Dedication) Act, 1982 and Rules
8) The Prohibition of Child Marriage (Karnataka Amendment) Act, 2016 and Rules.
9) The Karnataka Prevention and Eradication of Inhuman Evil Practices and Black Magic Act, 2017 and Rules
10) The Protection of Children from Sexual Offences Act 2012 (POCSO)
11) ಅಗತ್ಯವಿರುವ ಇತರೆ ಕಾಯ್ದೆ/ನಿಯಮಗಳ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬಹುದಾಗಿದೆ.

2. **ಯೋಜನೆಗಳ ಬಗ್ಗೆ :**

1) ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ನಿಗಮಗಳಿಂದ ಸಾಲ, ಸಹಾಯಧನ ನೀಡುವ ಕಾರ್ಯಕ್ರಮಗಳ ಬಗ್ಗೆ.
2) ಎಸ್.ಸಿ/ಎಸ್.ಟಿ ಉದ್ದಿಮೆದಾರರಿಗೆ ನೀಡಲಾಗುತ್ತಿರುವ ಸಾಲ/ಸಹಾಯಧನ ಯೋಜನೆಗಳ ಬಗ್ಗೆ.
3) ~~ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆಯಡಿ ಇತರೆ ಇಲಾಖೆಗಳು ಅನುಷ್ಠಾನ ಮಾಡುತ್ತಿರುವ~~ ಯೋಜನೆಗಳ ಬಗ್ಗೆ.
4) ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಅನುಕೂಲವಾಗುವಂತಹ ವಿದ್ಯಾರ್ಥಿವೇತನ, ವಿದೇಶಿ ವ್ಯಾಸಂಗಕ್ಕೆ ಧನಸಹಾಯ, ಪ್ರೋತ್ಸಾಹ ಧನ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ಇತ್ಯಾದಿ ಯೋಜನೆಗಳ ಬಗ್ಗೆ.
5) ಅಂತರ್ ಜಾತಿ ಮತ್ತು ಒಳಪಂಗಡಗಳ ವಿವಾಹ ಸೇರಿದಂತೆ ವಿವಿಧ ವಿವಾಹ ಕಾರ್ಯಕ್ರಮಗಳಿಗೆ ನೀಡುವ ಪ್ರೋತ್ಸಾಹ ಧನದ ಬಗ್ಗೆ.
6) ITBT Policy /ಕೈಗಾರಿಕಾ ನೀತಿ/ಜವಳಿ ನೀತಿ/KSFC/KIADB ಮತ್ತು ಬ್ಯಾಂಕ್‌ಗಳ ಸಾಲ ಹಾಗೂ ಇತ್ಯಾಧಿ ಯೋಜನೆಗಳ ಬಗ್ಗೆ

—3

**3. ಕಾರ್ಯಾಗಾರ/ವಿಚಾರಗೋಷ್ಠಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸುವ ಬಗ್ಗೆ:**

1) **ಕಾರ್ಯಾಗಾರ/ವಿಚಾರಗೋಷ್ಠಿ**-ಮುಖ್ಯವಾಗಿ ಜಿಲ್ಲಾ/ತಾಲ್ಲೂಕು/ಹೋಬಳಿ/ ಗ್ರಾಮ ಮಟ್ಟದಲ್ಲಿ ಕಾರ್ಯಾಗಾರ/ವಿಚಾರ ಗೋಷ್ಠಿ ಕಾರ್ಯಕ್ರಮಗಳನ್ನು ಆಯೋಜಿಸುವುದು. ಸದರಿ ಕಾರ್ಯಾಗಾರ/ ವಿಚಾರ ಗೋಷ್ಠಿ ಕಾರ್ಯಕ್ರಮಗಳಲ್ಲಿ ಕಂದಾಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, , ಸಮಾಜ ಕಲ್ಯಾಣ ಇಲಾಖೆ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಪೊಲೀಸ್ ಇಲಾಖೆ ಹಾಗೂ ಸಂಬಂಧಿಸಿದ ವಿವಿಧ ಅಭಿವೃದ್ಧಿ ಇಲಾಖೆಗಳ ಅಧಿಕಾರಿಗಳು ಭಾಗವಹಿಸಲು ಕ್ರಮವಹಿಸುವುದು.
2) ಸದರಿ ಕಾರ್ಯಾಗಾರ/ ವಿಚಾರ ಗೋಷ್ಠಿಗಳಲ್ಲಿ ವಿವಿಧ ಸ್ವಯಂ ಸೇವಾ ಸಂಸ್ಥೆಗಳು/ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಸಾಮಾಜಿಕ ಕಾರ್ಯಕರ್ತರು, ಪ.ಜಾತಿ/ಪ.ಪಂಗಡ ಹಾಗೂ ಇತರೆ ಸಮುದಾಯಗಳಿಗೆ ಸೇರಿದ ಸಾರ್ವಜನಿಕರು/ಪ್ರತಿನಿಧಿಗಳು ಭಾಗವಹಿಸುವಂತೆ ಕ್ರಮವಹಿಸುವುದು.

**4. ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಅರಿವು ಮೂಡಿಸುವುದು-**
ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಂಘ ಸಂಘಸಂಸ್ಥೆಗಳು ಸೇರಿದಂತೆ, ವಿವಿಧ ಸ್ವಯಂ . ಸೇವಾ ಸಂಸ್ಥೆಗಳು/ಸಂಘ ಸಂಸ್ಥೆಗಳ ಸಹಯೋಗ/ಸಮನ್ವಯದೊಂದಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಸಾರ್ವಜನಿಕರಲ್ಲಿ ವಿವಿಧ ಕಾಯ್ದೆ ಮತ್ತು ಯೋಜನೆಗಳ ಬಗ್ಗೆ ಅರಿವು ಮೂಡಿಸಲು ಕ್ರಮವಹಿಸುವುದು.

**5. ಕೇಂದ್ರ ಕಛೇರಿಯಿಂದ ಮಾಧ್ಯಮಗಳ ಮೂಲಕ ಅರಿವು ಮೂಡಿಸುವುದು-**
ಸಮಾಜ ಕಲ್ಯಾಣ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಕೇಂದ್ರ ಕಛೇರಿಗಳಿಂದ ಸಾಕ್ಷ್ಯಚಿತ್ರ, ಯಶೋಗಾಥೆ ಇತ್ಯಾದಿಗಳನ್ನು ದೂರದರ್ಶನ ಮತ್ತು ರೇಡಿಯೋ ಮೂಲಕ ಬಿತ್ತರಿಸಲು/ಪ್ರಕಟಿಸಲು ಕ್ರಮವಹಿಸುವುದು.

**6. ಸ್ವಯಂಸೇವಾ ಸಂಘ ಸಂಸ್ಥೆಗಳಿಗೆ ಇರಬೇಕಾದ ಅರ್ಹತೆಗಳು:-**

1) ಸ್ವಯಂ ಸೇವಾ ಸಂಘ ಸಂಸ್ಥೆಯು ನೋಂದಾಯಿತ ಸಂಸ್ಥೆಯಾಗಿದ್ದು, ನೊಂದಣಿ ಚಾಲ್ತಿಯಲ್ಲಿರಬೇಕು.
2) ಸ್ವಯಂ ಸೇವಾ ಸಂಘ ಸಂಸ್ಥೆಯು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಅಭಿವೃದ್ಧಿಗಾಗಿ ಕನಿಷ್ಠ 5 ವರ್ಷಗಳ ಸೇವೆಯೊಂದಿಗೆ ಅನುಭವ ಹೊಂದಿರಬೇಕು.
3) ಸ್ವಯಂ ಸೇವಾ ಸಂಘ ಸಂಸ್ಥೆಯು ಪ್ರತಿ ವರ್ಷ ಆಡಿಟ್ ಮಾಡಿಸಿರಬೇಕು.

**7. ಸ್ವಯಂ ಸೇವಾ ಸಂಘ ಸಂಸ್ಥೆಗಳು ಸಲ್ಲಿಸಬೇಕಾದ ದಾಖಲೆಗಳು :-**

1) ಸ್ವಯಂ ಸೇವಾ ಸಂಘ ಸಂಸ್ಥೆಯ ನೋಂದಣಿ ಪ್ರಮಾಣ ಪತ್ರ /ನವೀಕರಣ ಪ್ರಮಾಣ ಪತ್ರ/ ಮೂರು ವರ್ಷದ ಲೆಕ್ಕಪರಿಶೋಧನಾ ವರದಿ
2) ಸ್ವಯಂ ಸೇವಾ ಸಂಘ/ಸಂಸ್ಥೆಯು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭಿವೃದ್ಧಿಗಾಗಿ 5 ವರ್ಷ ಸೇವೆ ಸಲ್ಲಿಸಿರುವ ಬಗ್ಗೆ ದೃಢೀಕೃತ ದಾಖಲೆ.
3) ಅರಿವು ಮೂಡಿಸುವ ಕಾರ್ಯಕ್ರಮ ಆಯೋಜಿಸಿರುವ ಬಗ್ಗೆ ದಾಖಲೆಗಳ ಛಾಯಾಚಿತ್ರ ಪತ್ರಿಕಾ ವರದಿ.

---4

**8. ಸ್ವಯಂ ಸೇವಾ ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡುವ ಬಗ್ಗೆ:-**

ಆಯಾ ಜಿಲ್ಲಾ ಮಟ್ಟದಲ್ಲಿ ಸ್ವಯಂ ಸೇವಾ ಸಂಘ ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸಿ, ಮೇಲ್ಕಂಡ ಅರ್ಹತೆ/ಅನುಭವ ಇತ್ಯಾಧಿಗಳ ಬಗ್ಗೆ ಪರಿಶೀಲಿಸಿ, ಈ ಕೆಳಕಂಡ ಸಮಿತಿಯಿಂದ ಆಯ್ಕೆ ಮಾಡುವ ಬಗ್ಗೆ ಕ್ರಮವಹಿಸುವುದು.

| ಕ್ರ. ಸಂ. | ಅಧಿಕಾರಿಗಳು | ವಿವರ |
|---|---|---|
| 1. | ಅಪರ ಜಿಲ್ಲಾಧಿಕಾರಿ | ಅಧ್ಯಕ್ಷತೆ |
| 2. | ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್ | ಸದಸ್ಯರು |
| 3. | ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ | ಸದಸ್ಯರು |
| 4. | ಜಂಟಿ / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಸದಸ್ಯ ಕಾರ್ಯದರ್ಶಿ |

ಆಯ್ಕೆಯಾದ ಸ್ವಯಂ ಸೇವಾ ಸಂಘ ಸಂಸ್ಥೆಗಳನ್ನು ಸೇರಿಸಿಕೊಂಡು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸುವುದು. ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯಿಂದ ಜಿಲ್ಲಾ ಮಟ್ಟದ ಸಮುದಾಯ ಭವನಗಳಲ್ಲಿ/ಸಮಾಜ ಕಲ್ಯಾಣ ಇಲಾಖೆಯ ಕಛೇರಿಯಲ್ಲಿ **ಜಾಗೃತಿ ಕೇಂದ್ರಗಳನ್ನು** ನಿರ್ವಹಿಸಿ, ಜನರಿಗೆ ಮೇಲ್ಕಂಡ ಕಾಯ್ದೆಗಳು/ನಿಯಮಗಳು ಮತ್ತು ಇತರೆ ಯೋಜನೆಗಳ ಬಗ್ಗೆ ಅಗತ್ಯ ಮಾಹಿತಿಯನ್ನು ಒದಗಿಸಲು ಕ್ರಮವಹಿಸುವುದು.

**9. ಕಾರ್ಯಾಗಾರ/ವಿಚಾರಗೋಷ್ಠಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮಗಳ ವೆಚ್ಚಕ್ಕಾಗಿ ಈ ಕೆಳಕಂಡ ಆರ್ಥಿಕ ಮಿತಿಯನ್ನು ನಿಗದಿಪಡಿಸಲಾಗಿದೆ.**

| ಕ್ರ.ಸಂ | ವಿವರ | ಪ್ರತೀ ಕಾರ್ಯಕ್ರಮದ ವೆಚ್ಚದ ಗರಿಷ್ಟ ಮಿತಿ |
|---|---|---|
| 1 | ಗ್ರಾಮ ಪಂಚಾಯತ್ ಮಟ್ಟ | ರೂ. 20,000/-<br>(ಅರಿವು ಮೂಡಿಸುವ ಕಾರ್ಯಕ್ರಮಗಳಿಗೆ ಹೆಚ್ಚುವರಿ ಮೊತ್ತದ ಅಗತ್ಯವಿದ್ದಲ್ಲಿ ಗ್ರಾಮ ಪಂಚಾಯತ್‌ಗಳು ತಮ್ಮ ಅನುದಾನದಿಂದ ಭರಿಸುವುದು) |
| 2 | ಹೋಬಳಿ ಮಟ್ಟ/3-4 ಗ್ರಾಮ ಪಂಚಾಯತ್‌ಗಳು ಸೇರಿ | ರೂ. 40,000/-<br>(ಅರಿವು ಮೂಡಿಸುವ ಕಾರ್ಯಕ್ರಮಗಳಿಗೆ ಹೆಚ್ಚುವರಿ ಮೊತ್ತದ ಅಗತ್ಯವಿದ್ದಲ್ಲಿ ಗ್ರಾಮ ಪಂಚಾಯತ್‌ಗಳು ತಮ್ಮ ಅನುದಾನದಿಂದ ಭರಿಸುವುದು) |
| 3 | ತಾಲ್ಲೂಕು ಮಟ್ಟ (ಕಾರ್ಯಾಗಾರ/ವಿಚಾರಗೋಷ್ಠಿ) | ಪ್ರತಿ ಕಾರ್ಯಕ್ರಮಕ್ಕೆ ರೂ. 75,000/- ದಂತೆ<br>2 ಕಾರ್ಯಕ್ರಮಗಳಿಗೆ ರೂ. 1,50,000/-<br>(ವಾರ್ಷಿಕ 02 ಕಾರ್ಯಾಗಾರ/ ವಿಚಾರಗೋಷ್ಠಿಗಳನ್ನು ಆಯೋಜಿಸುವುದು ಹೆಚ್ಚುವರಿ ಮೊತ್ತ ಅಗತ್ಯವಿದ್ದಲ್ಲಿ ತಾಲ್ಲೂಕು ಪಂಚಾಯತಿ/ ನಗರ ಸ್ಥಳೀಯ ಸಂಸ್ಥೆಗಳು ತಮ್ಮ ಅನುದಾನದಿಂದ ಹೆಚ್ಚುವರಿ ಮೊತ್ತವನ್ನು ಭರಿಸುವುದು. |

---5

| | | |
|---|---|---|
| 4 | ಜಿಲ್ಲಾ ಮಟ್ಟ (ಕಾರ್ಯಾಗಾರ/ವಿಚಾರಗೋಷ್ಠಿ) | ಪ್ರತಿ ಕಾರ್ಯಕ್ರಮಕ್ಕೆ ರೂ. 1,00,000/- ದಂತೆ<br>2 ಕಾರ್ಯಕ್ರಮಗಳಿಗೆ ರೂ. 2,00,000/-<br>(ವಾರ್ಷಿಕ 02 ಕಾರ್ಯಾಗಾರ/ವಿಚಾರಗೋಷ್ಠಿಗಳಿಗೆ)<br>ಹೆಚ್ಚುವರಿ ಮೊತ್ತ ಅಗತ್ಯವಿದ್ದಲ್ಲಿ ಜಿಲ್ಲಾ ಪಂಚಾಯತ್/ನಗರ ಸ್ಥಳೀಯ ಸಂಸ್ಥೆಗಳು ತಮ್ಮ ಅನುದಾನದಿಂದ ಹೆಚ್ಚುವರಿ ಮೊತ್ತವನ್ನು ಭರಿಸುವುದು. |
| 5 | ಕಾರ್ಯಾಗಾರ/ ವಿಚಾರಗೋಷ್ಠಿಗಳಲ್ಲಿ ವಿಷಯ ತಜ್ಞರಿಗೆ ಗೌರವಧನ | ಗರಿಷ್ಟ ರೂ.1000/- ಗಳು |

ಅನುದಾನದ ಲಭ್ಯತೆಗನುಗುಣವಾಗಿ ಕಾರ್ಯಕ್ರಮಗಳನ್ನು ಆಯೋಜಿಸುವುದು. ಕಾರ್ಯಾಗಾರ/ ವಿಚಾರಗೋಷ್ಠಿಗಳಲ್ಲಿ ಭಾಗವಹಿಸುವವರಿಗೆ ಲಘು ಉಪಹಾರ/ಭೋಜನ ವ್ಯವಸ್ಥೆ, ವಿಡಿಯೋ ಛಾಯಾಚಿತ್ರಗಳ ವೆಚ್ಚವನ್ನು ಮೇಲ್ಕಂಡ ಮೊತ್ತದಲ್ಲಿ ಭರಿಸುವುದು.

**ಇತರ ಸೂಚನೆಗಳು :**

- ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ಮೊದಲನೇ ಸಭೆಯಲ್ಲಿ ಕ್ಯಾಲೆಂಡರ್ ವರ್ಷದಲ್ಲಿ ಅತೀ ಹೆಚ್ಚು ದಾಖಲಾಗುವ ದೌರ್ಜನ್ಯ ಪ್ರಕರಣಗಳು ಮತ್ತು ಆಗಾಗ್ಗೆ ದೌರ್ಜನ್ಯ ಪ್ರಕರಣಗಳು ದಾಖಲಾಗುತ್ತಿರುವ ಜಿಲ್ಲಾ/ತಾಲ್ಲೂಕು/ಹೋಬಳಿ/ ಗ್ರಾಮ ಗಳಲ್ಲಿ ಆಯ್ಕೆ ಮಾಡಿ ಅರಿವು ಮೂಡಿಸುವ ಮತ್ತು ವಿಚಾರಗೋಷ್ಠಿ/ ಕಾರ್ಯಕ್ರಮಗಳನ್ನು ಆಯೋಜಿಸಲು ಕ್ರಮವಹಿಸುವುದು.
- ಸಮಾಜ ಕಲ್ಯಾಣ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಜಿಲ್ಲಾ ಕೇಂದ್ರ ಸ್ಥಾನಗಳಲ್ಲಿ, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಉಪಸ್ಥಿತಿಯಲ್ಲಿ ವಿಚಾರಗೋಷ್ಠಿ/ ಕಾರ್ಯಾಗಾರಗಳನ್ನು ಆಯೋಜಿಸುವುದು.
- ತಾಲ್ಲೂಕು ಮಟ್ಟದ ಕಾರ್ಯಾಗಾರಗಳನ್ನು ಉಪ ವಿಭಾಗಾಧಿಕಾರಿಗಳು, ಉಪ ಪೊಲೀಸ್ ವರಿಷ್ಠಾಧಿಕಾರಿಗಳು, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ತಹಶೀಲ್ದಾರರ ಉಪಸ್ಥಿತಿಯಲ್ಲಿ ಆಯೋಜಿಸುವುದು.
- ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿಚಾರಗೋಷ್ಠಿ/ಕಾರ್ಯಾಗಾರಗಳಲ್ಲಿ ಮುಖ್ಯವಾಗಿ **ದೌರ್ಜನ್ಯ ತಡೆ ಅಧಿನಿಯಮ/ನಾಗರಿಕ ಹಕ್ಕುಗಳ ಸಂರಕ್ಷಣಾ ಕಾಯ್ದೆಗಳ ಬಗ್ಗೆ**, ವಿವಿಧ ದೇವಸ್ಥಾನಗಳ ವ್ಯವಸ್ಥಾಪಕರು/ಆಡಳಿತ ಮಂಡಳಿಯ ಸದಸ್ಯರು, ಹೋಟೆಲ್ ಮಾಲೀಕರು, ಇನ್ನಿತರ ವೃತ್ತಿಪರ ಸೇವಾ ಘಟಕಗಳ ಮುಖ್ಯಸ್ಥರು ಮತ್ತು ಎಸ್.ಸಿ/ಎಸ್.ಟಿ ಹಾಗೂ ಇತರೆ ಸಂಘ ಸಂಸ್ಥೆಗಳ ಪ್ರತಿನಿಧಿಗಳು/ ಸಾಮಾಜಿಕ ಕಾರ್ಯಕರ್ತರನ್ನು ಆಹ್ವಾನಿಸಿ ಸದರಿ ಕಾಯ್ದೆ/ಕಾನೂನಿನ ನಿಯಮಗಳ ಬಗ್ಗೆ ಜಾಗೃತಿಯನ್ನು ಮೂಡಿಸುವುದು.
- ಸದರಿ ವಿಚಾರಗೋಷ್ಠಿ/ ಕಾರ್ಯಾಗಾರ/ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯ್ಕೆಯಾದ ಸ್ವಯಂ ಸೇವಾ ಸಂಘ ಸಂಸ್ಥೆಗಳ ಸಹಯೋಗ ಮತ್ತು ಸಮನ್ವಯದೊಂದಿಗೆ ಆಯೋಜಿಸುವುದು.

---6

- ಕಾರ್ಯಗಾರ / ವಿಚಾರಗೋಷ್ಠಿಗಳ ಆಯೋಜನೆಗೆ ಸಂಬಂಧಿಸಿದ ನಗರ/ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಂದ ಸಹ ಹೆಚ್ಚುವರಿ ಅನುದಾನವನ್ನು ಪಡೆಯಲು ಕ್ರಮವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ. ಸುಮಿತ್ರ)
ಸರ್ಕಾರದ ಉಪ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:-**

1. ಮಹಾಲೇಖಪಾಲರು, (ಎ & ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಎಲ್ಲಾ ಪ್ರಾದೇಶಿಕ ಆಯುಕ್ತರು, ಕಂದಾಯ ಇಲಾಖೆ.
3. ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯ, ಬೆಂಗಳೂರು.
4. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
6. ಜಿಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
7. ಎಲ್ಲಾ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳು.
8. ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
9. ಎಲ್ಲಾ ಉಪ ವಿಭಾಗಾಧಿಕಾರಿಗಳು, ಕಂದಾಯ ಇಲಾಖೆ.
10. ಎಲ್ಲಾ ಜಿಲ್ಲೆಗಳ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
11. ಎಲ್ಲಾ ತಾಲ್ಲೂಕು ತಹಶೀಲ್ದಾರರುಗಳು.
12. ಎಲ್ಲಾ ತಾಲ್ಲೂಕುಗಳ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
    **(ಕ್ರ.ಸಂ.2 ಮತ್ತು 5 ರಿಂದ 12 ರವರೆಗೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಮುಖೇನ)**
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

---

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.

******